# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2688

ಉತ್ತರ ದಿನಾಂಕ : 25.03.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಧಾರವಾಡ, ಗದಗ, ಹಾವೇರಿ, ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ; | ಧಾರವಾಡ, ಗದಗ, ಹಾವೇರಿ, ಜಿಲ್ಲೆಗಳಲ್ಲಿ ಜಲ ಜೀವನ ಮಿಷನ್ ಯೋಜನೆಯಡಿ ಎಲ್ಲಾ ಗ್ರಾಮೀಣ ಜನವಸತಿಗಳ ಪ್ರತಿ ಮನೆಗೆ ಕಾರ್ಯಾತ್ಮಕ ನಳ ಸಂಪರ್ಕ ಕಲ್ಪಿಸಲು, 55 ಎಲ್.ಪಿ.ಸಿ.ಡಿ ಕುಡಿಯುವ ನೀರನ್ನು ಒದಗಿಸಲು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>• ಧಾರವಾಡ ಜಿಲ್ಲೆಯಲ್ಲಿ ಸುಸ್ಥಿರ ಜಲಮೂಲ ಆಧರಿಸಿ ಕುಡಿಯುವ ನೀರನ್ನು ಒದಗಿಸಲು ಜೆ.ಜೆ.ಎಂ ಅಡಿ ಸಮಗ್ರ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ರೂಪಿಸಿದ್ದು, ಯೋಜನೆಯು ಪ್ರಸ್ತುತ ಟೆಂಡರ್ ಪ್ರಕ್ರಿಯೆಯಲ್ಲಿದೆ.<br>• ಗದಗ ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ 2018 ರಿಂದ 2 ಸಮಗ್ರ ಡಿ.ಬಿ.ಓ.ಟಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಮೂಲಕ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ.<br>• ಹಾವೇರಿ ಜಿಲ್ಲೆಯಲ್ಲಿ ಈಗಾಗಲೇ ಅನುಷ್ಠಾನಗೊಳಿಸಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಂದ ಒಟ್ಟು 237 ಜನವಸತಿಗಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲಾಗುತ್ತಿದೆ, ಉಳಿದ 493 ಗ್ರಾಮೀಣ ಜನವಸತಿಗಳಲ್ಲಿ ಕುಡಿಯುವ ನೀರಿನ ಪರಿಹಾರಕ್ಕಾಗಿ ಲಭ್ಯ ಮೇಲ್ಮೈ ಜಲಮೂಲಗಳಿಂದ 3 ಹೊಸ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಜೆ.ಜೆ.ಎಂ ಯೋಜನೆಯಡಿ ರೂಪಿಸಲಾಗಿದೆ. ಈ ಪೈಕಿ 2 ಯೋಜನೆಗಳು ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ, ಇನ್ನುಳಿದ 1 ಯೋಜನೆಯ ಪ್ರಾಥಮಿಕ ಯೋಜನಾ ವರದಿ ಸಿದ್ಧಪಡಿಸಲಾಗಿರುತ್ತದೆ. |
| ಆ) | ಧಾರವಾಡ, ಗದಗ, ಹಾವೇರಿ, ಜಿಲ್ಲೆಗಳ ವ್ಯಾಪ್ತಿಯಲ್ಲಿ ಬೇಸಿಗೆ ಸಾಲಿನಲ್ಲಿ ಕುಡಿಯುವ ನೀರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ಜಿಲ್ಲೆಗಳಲ್ಲಿ ಬೇಸಿಗೆ ಸಾಲಿನಲ್ಲಿ ಕುಡಿಯುವ ನೀರಿನ ತೊಂದರೆ ಪರಿಹಾರಕ್ಕಾಗಿ SDP/Non-SDP ಮತ್ತು CAP ಗಳಲ್ಲಿ ಅನುದಾನ ಒದಗಿಸಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಈ ರೀತಿಯ ಸಮಸ್ಯೆಗಳಿಗೆ ಪರಿಹಾರ ನೀಡುವಲ್ಲಿ ವಿಫಲರಾದಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ? | ಅನ್ವಯಿಸುವುದಿಲ್ಲ; |

ಸಂ:ಗ್ರಾಕುನೀ&ನೈಇ 200 ಗ್ರಾನೀಸ(4)2022

(ಕೆ.ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು